ಉ) ದಿನಾಂಕ: 8.3.94ರಂದು

ಕರ್ನಾಟಕ ಸರ್ಕಾರ ಸಚಿವಾಲಯದ ಉಪಹಾರ ಮಂದಿರ

531 - ಶ್ರೀ ಜಿ. ಪುಟ್ಟಸ್ವಾಮಿಗೌಡ (ಹೊಳೆನರಸೀಪುರ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕರ್ನಾಟಕ ಸರ್ಕಾರದ ಸಚಿವಾಲಯದ ಉಪಹಾರ ಮಂದಿರವನ್ನು ಸರ್ಕಾರದಿಂದ ನೇಮಿಸಿರುವ ಸಮಿತಿ ನಡೆಸುತ್ತಿರುವುದು ನಿಜವಲ್ಲವೇ?*

ಆ) *ಆ ಉಪಹಾರ ಮಂದಿರವನ್ನು ಯಾವ ದಿನಾಂಕದಿಂದ ಸರ್ಕಾರವು ನೇಮಿಸಿರುವ ಸಮಿತಿ ನಡೆಸುತ್ತಿದೆ?*

ಇ) *ಆ ಉಪಹಾರ ಮಂದಿರದಲ್ಲಿ ಒಟ್ಟು ಕೆಲಸ ಮಾಡುತ್ತಿರುವ ನೌಕರರ ಸಂಖ್ಯೆ ಎಷ್ಟು?*

ಈ) *ಆ ನೌಕರರುಗಳ ಪೈಕಿ ಎಷ್ಟು ಜನ ಹತ್ತು ವರ್ಷಕ್ಕೂ ಮೀರಿ ನಿರಂತರ ಸೇವೆ ಸಲ್ಲಿಸುತ್ತಿದ್ದಾರೆ?*

ಉ) *ಸುಪ್ರೀಮ್ ಕೋರ್ಟ್ ಆದೇಶದಂತೆ ಹತ್ತು ವರ್ಷಕ್ಕೂ ಮೇಲ್ಪಟ್ಟು ಕೆಲಸ ಮಾಡುತ್ತಿರುವ ಆ ನೌಕರರುಗಳನ್ನು ಖಾಯಂಗೊಳಿಸಲಾಗಿದೆಯೇ?*

ಊ) *ಇಲ್ಲದಿದ್ದಲ್ಲಿ ಕೂಡಲೇ ಆ ನೌಕರರುಗಳನ್ನು ಮಾನವೀಯ ದೃಷ್ಟಿಯಿಂದ ಖಾಯಂಗೊಳಿಸಲು ಕ್ರಮ ಕೈಗೊಳ್ಳುವುದೇ?*

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು):

ಅ) ಹೌದು.

ಆ) 19-11-1974

ಇ) 70 (ಎಪ್ಪತ್ತು)

ಈ) 35 (ಮೂವತ್ತೈದು)

ಉ) ಇವರುಗಳು ಸಾರ್ವಜನಿಕ ಸೇವೆಯನ್ನು ಸಲ್ಲಿಸಲು ಸರ್ಕಾರದಿಂದ ನೇಮಿತರಾದ ನೌಕರರಲ್ಲ. ಆದುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಊ) ಪರಿಶೀಲನೆ ಮಾಡಲಾಗುತ್ತಿದೆ.

ಹಿರೇಬಾಗೇವಾಡಿಯಲ್ಲಿ ಬಸ್ ನಿಲ್ದಾಣದ ನಿರ್ಮಾಣ

584 - ಶ್ರೀ ಕೆ.ಸಿ. ಮೊಡಗೇಕರ್ ದೇಸಾಯಿ (ಬಾಗೇವಾಡಿ): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳಗಾವಿ ತಾಲ್ಲೂಕಿನ ಹಿರೇಬಾಗೇವಾಡಿಯಲ್ಲಿ ಯೋಗ್ಯವಾದ ಬಸ್ನಿಲ್ದಾಣದ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ;*

ಆ) *ಹಾಗಿದ್ದರೆ, ಜಮೀನು ಸ್ವಾಧೀನ ಪಡಿಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮವೇನು;*

ಇ) *ಮುಂದಿನ ಆಯವ್ಯಯದಲ್ಲಿ ಎಷ್ಟು ಹಣ ಕಾದಿರಿಸಲಾಗಿದೆ?*

ಶ್ರೀ ಭೀಮಣ್ಣ ಖಂಡ್ರೆ (ಸಾರಿಗೆ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.